ತದನಂತರ ಸಿಬ್ಬಂದಿಗಳ ಹುದ್ದೆಗಳನ್ನು ಇಲಾಖಾ ನೇರ ನೇಮಕಾತಿ ಸಮಿತಿ ಮುಖಾಂತರ ಹಾಗೂ ಕೆಲವು ಹುದ್ದೆಗಳನ್ನು ಪದೋನ್ನತಿ ಮೂಲಕ ನೇಮಕ ಮಾಡಿಕೊಳ್ಳಲು ಉದ್ದೇಶಿಸಲಾಗಿದೆ.

ಆಯುರ್ವೇದ ಆಸ್ಪತ್ರೆಯ ಹಸ್ತಾಂತರ

2762 (2733), ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ)

ಅ) ಮಾಗಡಿ ಪಟ್ಟಣದಲ್ಲಿ ನಿರ್ಮಿಸಿರುವ ಆಯುರ್ವೇದ ಆಸ್ಪತ್ರೆಯ ಕಟ್ಟಡವನ್ನು ಇಲಾಖೆಯ ವಶಕ್ಕೆ ಹಸ್ತಾಂತರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಯಾವ ಕಾಲಮಿತಿಯಲ್ಲಿ ಹಸ್ತಾಂತರಿಸಲಾಗುವುದು, ಹಸ್ತಾಂತರಿಸದಿರುವ ಅಧಿಕಾರಿಗಳ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮವೇನು;

ಆ) ಈ ಆಸ್ಪತ್ರೆಗೆ ಕೊಳವೆಬಾವಿ ಮತ್ತು ಕಾಂಪೌಂಡ್ ಗೋಡೆಯನ್ನು ನಿರ್ಮಿಸಲಾಗಿದೆಯೇ, ಕೊಳವೆ ಬಾವಿ ಮತ್ತು ಕಾಂಪೌಂಡ್ ಗೋಡೆ ನಿರ್ಮಾಣಕ್ಕೆ ಎಷ್ಟು ಅನುದಾನ ಬಿಡುಗಡೆಯಾಗಿದೆ, ಎಷ್ಟು ಖರ್ಚಾಗಿದೆ, ಯಾವಾಗ ಗುತ್ತಿಗೆದಾರರಿಗೆ ಪಾವತಿ ಮಾಡಲಾಗಿದೆ, ಕಾಮಗಾರಿಗಳನ್ನು ಪೂರ್ಣಗೊಳಿಸದ ಗುತ್ತಿಗೆದಾರರ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮವೇನು?

ಶ್ರೀ ಯು.ಟಿ.ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಈಗಾಗಲೇ ಕಟ್ಟಡ ಕಾಮಗಾರಿ ಪೂರ್ಣಗೊಂಡು ಸದರಿ ಕಟ್ಟಡದಲ್ಲಿ ಆಸ್ಪತ್ರೆಯು ಕಾರ್ಯನಿರ್ವಹಿಸುತ್ತಿದೆ.

ಆ) ಕೊಳವೆ ಬಾವಿ ಮತ್ತು ಕಾಂಪೌಂಡ್ ಕಾಮಗಾರಿಗೆ ರಾಜ್ಯವಲಯದ ಅನುದಾನದಲ್ಲಿ ₹ 14.00 ಲಕ್ಷಗಳ ಅನುದಾನವನ್ನು ಕೆ.ಹೆಚ್.ಎಸ್.ಡಿ.ಆರ್.ಪಿ. ಇವರಿಗೆ ಡಿಸೆಂಬರ್–2013ರಲ್ಲಿ ಬಿಡುಗಡೆ ಮಾಡಲಾಗಿದೆ. ಪ್ರಸ್ತುತ ಈ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ

ಪ್ರಗತಿಯಲ್ಲಿದ್ದು, ಟೆಂಡರ್ ಅಂಗೀಕಾರಗೊಂಡ ನಂತರ ಕಾಮಗಾರಿಯನ್ನು ಗುತ್ತಿಗೆದಾರರಿಗೆ ವಹಿಸಿಕೊಟ್ಟು ಪೂರ್ಣಗೊಳಿಸಲಾಗುವುದು.

ಇಲಾಖೆಯ ವಿದ್ಯಾರ್ಥಿ ನಿಲಯಗಳು

2763 (2981), ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು)

ಅ) ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸಲಾಗುತ್ತಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; ಆ ಹಾಸ್ಟೆಲ್‌ಗಳ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

ಆ) 2014–15ನೇ ಸಾಲಿನಲ್ಲಿ ಪ್ರತಿಯೊಂದು ಹಾಸ್ಟೇಲ್‌ಗಳಲ್ಲಿ ಪ್ರವೇಶ ಪಡೆದುಕೊಂಡಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?

ಶ್ರೀ ಹೆಚ್.ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಸಮಾಜ ಕಲ್ಯಾಣ ಇಲಾಖೆ ವತಿಯಿಂದ 1241 ಮೆಟ್ರಿಕ್ ಪೂರ್ವ ಮತ್ತು 487 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು ಹಾಗೂ ಪರಿಶಿಷ್ಟ ಪಂಗಡಗಳ ನಿರ್ದೇಶನಾಲಯದ ವತಿಯಿಂದ 134 ಮೆಟ್ರಿಕ್ ಪೂರ್ವ ಹಾಗೂ 60 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿನ ವಿದ್ಯಾರ್ಥಿಗಳ ಸಂಖ್ಯೆ, ತಾಲ್ಲೂಕುವಾರು ವಿವರಗಳನ್ನು ಅನುಬಂಧ–1 ಮತ್ತು 2ರಲ್ಲಿ ಒದಗಿಸಲಾಗಿದೆ.

ಆ) 2014–15ನೇ ಸಾಲಿನಲ್ಲಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಪ್ರಕ್ರಿಯೆ 2014ರ ಜುಲೈ ಅಂತ್ಯದವರೆಗೂ ಜಾರಿಯಲ್ಲಿರುತ್ತದೆ. ಆದ್ದರಿಂದ ಈ ಹಂತದಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ನೀಡಲು ಸಾಧ್ಯವಾಗುವುದಿಲ್ಲ.